ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 28-04-2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಕಿಯಾನಿಕ್ಸ್ ಸಂಸ್ಥೆಯ "ಕೆ-ಟಾಕ್" ಅಡಿಯಲ್ಲಿ ಆರೋಗ್ಯ ಪಾಲನೆಯಲ್ಲಿ ಟೆಲಿಮೆಡಿಸಿನ್‌ನ ಪಾತ್ರ ಕುರಿತು ವಿಚಾರಸಂಕಿರಣ<br><br>ಭಾಷಣಕಾರರು:<br><br>ಡಾ. ಜಿ. ಗಣಪತಿ, ನ್ಯೂರೋ ಸರ್ಜನ್, ಅಧ್ಯಕ್ಷರು, ಅಪಲೋ ಟೆಲಿಮೆಡಿಸಿನ್ ಫೌಂಡೇಷನ್, | 29-04-2016<br>ಶುಕ್ರವಾರ<br>ಬೆಳಿಗ್ಗೆ<br>11-00 ಗಂಟೆಗೆ | ಸೆನೆಟ್ ಹಾಲ್, ಹೋಟೆಲ್ ಕ್ಯಾಪಿಟಲ್, ಬೆಂಗಳೂರು. |
| 2. | ಬೆಂಗಳೂರು ಮೆಟ್ರೋ ರೈಲಿನ ಕಬ್ಬನ್ ಪಾರ್ಕ್‌ನಿಂದ ಸಿಟಿ ರೈಲ್ವೇ ಸ್ಟೇಷನ್ ವಿಭಾಗದ ಸುರಂಗ ಮಾರ್ಗದ ಉದ್ಘಾಟನಾ ಸಮಾರಂಭ<br><br>ಉದ್ಘಾಟನೆ ಹಾಗೂ ಹಸಿರು ನಿಶಾನೆ:<br><br>ಸಿದ್ದರಾಮಯ್ಯ<br>ಮುಖ್ಯಮಂತ್ರಿ<br>ಹಾಗೂ<br>ಎಂ. ವೆಂಕಯ್ಯ ನಾಯ್ಡು,<br>ಕೇಂದ್ರ ನಗರಾಭಿವೃದ್ಧಿ ಹಾಗೂ ಸಂಸದೀಯ ವ್ಯವಹಾರಗಳ ಖಾತೆಯ ಸಚಿವರು.<br><br>ಅಧ್ಯಕ್ಷತೆ:<br><br>ಆರ್. ರೋಷನ್ ಬೇಗ್, ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಖಾತೆ ಸಚಿವರು. | 29-04-2016<br>ಶುಕ್ರವಾರ<br>ಸಂಜೆ<br>6-00 ಗಂಟೆಗೆ | ಗ್ರ್ಯಾಂಡ್ ಸ್ಟೆಪ್ಸ್ ವಿಧಾನಸೌಧ, ಬೆಂಗಳೂರು |

ನಿರ್ದೇಶಕರ ಪರವಾಗಿ

**ಪತ್ರಿಕಾ ಪ್ರಕಟಣೆ**

# ಕರ್ನಾಟಕ ಮೇಲ್ಮನವಿ ನ್ಯಾಯಾಧಿಕರಣಕ್ಕೆ ಬೇಸಿಗೆ ರಜೆ

ಬೆಂಗಳೂರು, ಏಪ್ರಿಲ್ 28 (ಕರ್ನಾಟಕ ವಾರ್ತೆ)

ಬೆಂಗಳೂರಿನ ಡಾ. ಅಂಬೇಡ್ಕರ್ ವೀದಿಯ ಬಹುಮಹಡಿ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ಮೇಲ್ಮನವಿ ನ್ಯಾಯಾಧಿಕರಣದ ಎಲ್ಲಾ ನ್ಯಾಯಪೀಠಗಳಿಗೆ ಬರುವ ಮೇ 2 ರಿಂದ ಮೇ 27 ರವರೆಗೆ ಬೇಸಿಗೆ ರಜೆಯನ್ನು ಘೋಷಿಸಲಾಗಿದೆ. ಈ ಅವಧಿಯಲ್ಲಿ ಕೆಲವು ನ್ಯಾಯಫೀಠಗಳು ಏಕಸದಸ್ಯ ಪೀಠವಾಗಿ ಹಾಗೂ ಕೆಲವು ನ್ಯಾಯಪೀಠಗಳು ಪೀಠರಹಿತವಾಗಿ ಕಾರ್ಯನಿರ್ವಹಿಸಲಿದೆ ಎಂದು ಕರ್ನಾಟಕ ಮೇಲ್ಮನವಿ ನ್ಯಾಯಾಧಿಕರಣದ ನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಾಬು:ಜಿಪಿಆರ್

# ವಿಶ್ವ ಕಾರ್ಮಿಕರ ದಿನಾಚರಣೆ – ಬಾಲ ಭವನಕ್ಕೆ ರಜೆ

ಬೆಂಗಳೂರು, ಏಪ್ರಿಲ್ 28 (ಕರ್ನಾಟಕ ವಾರ್ತೆ)

ಮೇ 1 ರಂದು ವಿಶ್ವ ಕಾರ್ಮಿಕರ ದಿನಾಚರಣೆಯ ಅಂಗವಾಗಿ ಕಬ್ಬನ್ ಪಾರ್ಕಿನ ಬಾಲಭವನಕ್ಕೆ ರಜೆಯನ್ನು ಘೋಷಿಸಲಾಗಿದೆ. ಅಂದು ಸಾರ್ವಜನಿಕರಿಗೆ/ಮಕ್ಕಳಿಗೆ ಬಾಲ ಭವನದಲ್ಲಿ ಯಾವುದೇ ಕಾರ್ಯಕ್ರಮಗಳು ಹಾಗೂ ಚಟುವಟಿಕೆಗಳು ಇರುವುದಿಲ್ಲ ಎಂದು ಬಾಲ ಭವನ ಕಾರ್ಯದರ್ಶಿ ತಿಳಿಸಿದ್ದಾರೆ.

ಬಾಬು:ಜಿಪಿಆರ್

# ನೋಂದಣಿ ಸಂಖ್ಯೆ ಬಹಿರಂಗ ಹರಾಜು

ಬೆಂಗಳೂರು, ಏಪ್ರಿಲ್ 28 (ಕರ್ನಾಟಕ ವಾರ್ತೆ)

ಕರ್ನಾಟಕ ಮೋಟಾರು ವಾಹನ ನಿಯಾಮಾವಳಿ –1989ರ, ನಿಯಮ – 46 (AA) ಪ್ರಕಾರ ಲಘು ಮೋಟಾರು ವಾಹನಗಳಿಗೆ (ಸಾರಿಗೇತರ ವರ್ಗದ, ಕಾರು, ಜೀಪು ಇತ್ಯಾದಿ ಸ್ವಂತ ಉಪಯೋಗಕ್ಕೆ ಬಳುಸುವ ವಾಹನಗಳು) ದಿನಾಂಕ 02–05–2016 ರಂದು ಉಪ ಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿ ಕಚೇರಿ, ಬೆಂಗಳೂರು (ಪೂರ್ವ) ಕಚೇರಿಯಲ್ಲಿ ಪ್ರಾರಂಭಿಸಲಾಗುವ "KA-03/MZ" ಮುಂಗಡ ನೋಂದಣಿ ಶ್ರೇಣಿಯಲ್ಲಿ ಆಯ್ಕೆ ನೋಂದಣಿ ಸಂಖ್ಯೆಗಳನ್ನು ಸಾರಿಗೆ ಆಯುಕ್ತರ ಕಚೇರಿ, 1ನೇ ಮಹಡಿ, ಟಿಟಿಎಂಸಿ ಕಟ್ಟಡ, ಕೆ.ಹೆಚ್. ರಸ್ತೆ, ಶಾಂತಿನಗರ, ಬೆಂಗಳೂರು – 560 027 ಇಲ್ಲಿ ಬೆಳಿಗ್ಗೆ 12.00 ಗಂಟೆಗೆ ಬಹಿರಂಗ ಹರಾಜು ಮೂಲಕ ಹಂಚಿಕೆ ಮಾಡಲು ನಿಗಧಿಪಡಿಸಲಾಗಿರುತ್ತದೆ. ಈ ದಿನಾಂಕದಂದು ಹರಾಜಿನಲ್ಲಿ ಭಾಗವಹಿಸುವ ಸಾರ್ವಜನಿಕರು ಭರ್ತಿಮಾಡಿದ ಅರ್ಜಿಯೊಂದಿಗೆ ಕಾರ್ಯದರ್ಶಿ, ರಾಜ್ಯ ಸಾರಿಗೆ ಪ್ರಾಧಿಕಾರ, ಬೆಂಗಳೂರು ಇವರ ಹೆಸರಿನಲ್ಲಿ ಪಡೆದ 75,000/ ರೂ. ಗಳ ಡಿಮಾಂಡ್ ಡ್ರಾಫ್ಟ್‌ನ್ನು (ಸಹಕಾರಿ ಬ್ಯಾಂಕ್‌ಗಳಲ್ಲಿ ಪಡೆದ ಡಿ.ಡಿ.ಗಳನ್ನು ಹೊರತುಪಡಿಸಿ) ಬೆಳಿಗ್ಗೆ 10.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯ ಒಳಗೆ ಕಚೇರಿಗೆ ಸಲ್ಲಿಸುವುದು.

ಈ ಬಗ್ಗೆ ಅಧಿಸೂಚನೆಯನ್ನು ಇಲಾಖೆಯ ವೆಬ್‌ಸೈಟ್ **www.rto.kar.nic.in** ರಲ್ಲಿ ಪ್ರಕಟಿಸಲಾಗಿದೆ ಹಾಗೂ ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ **080 22232434** ಗೆ ಸಂಪರ್ಕಿಸಬಹುದಾಗಿದೆ.

ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ ಈ ಯೋಜನೆಯ ಸಂಪೂರ್ಣ ಪ್ರಯೋಜನವನ್ನು ಪಡೆದುಕೊಳ್ಳಲು ಕೋರಿದೆ.

ಬಾಬು:ಜಿಪಿಆರ್

## ಲಿಖಿತ ಪರೀಕ್ಷೆ

ಬೆಂಗಳೂರು, ಏಪ್ರಿಲ್ 28 (ಕರ್ನಾಟಕ ವಾರ್ತೆ)

2016 ನೇ ಸಾಲಿನ ಪೊಲೀಸ್ ಕಾನ್‌ಸ್ಟೇಬಲ್, ವೈರ್‌ಲೆಸ್ (ಪುರುಷ ಮತ್ತು ಮಹಿಳೆ) ನೇರ ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಸಹಿಷ್ಣುತೆ, ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹರಾದ ಅಭ್ಯರ್ಥಿಗಳಿಗೆ ಮೇ 1 ರಂದು ಬೆಳಿಗ್ಗೆ ಹಾಜರಾಗಿ, ಸರ್ಕಾರಿ ರಾಮ್ ನಾರಾಯಣ ಚೆಲ್ಲಾರಾಂ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ಅರಮನೆ ರಸ್ತೆ, ಬೆಂಗಳೂರು ಇಲ್ಲಿ ಬೆಳಿಗ್ಗೆ 11–00 ರಿಂದ 12–30 ಗಂಟೆವರೆಗೆ ಲಿಖಿತ ಪರೀಕ್ಷೆಗೆ ಹಾಜರಾಗಲು ಸೂಚಿಸಿದೆ. ಅರ್ಹ ಅಭ್ಯರ್ಥಿ ವೆಬ್‌ಸೈಟ್ www.ksp.gov.in ನಿಂದ ಲಿಖಿತ ಪರೀಕ್ಷೆಯ ಕರೆಪತ್ರವನ್ನು ಡೌನ್‌ಲೋಡ್ ಮಾಡಿಕೊಂಡು ಪರೀಕ್ಷೆ ಹಾಜರಾಗಲು ಸೂಚಿಸಿದೆ.

ಬಾಬು:ಜಿಪಿಆರ್

## Written Examination

Bengaluru, Apr 28 (Karnataka Information)

The written examination for the candidates qualified in ET & PST for the post of Police Constable, Wireless (Men &Women) is held on 01-05-2016 should be present at Govt. RC, Commerce and Management College, Palace Road, Bangalore" examination commence from 11.00 am to12.30 pm. Eligible candidate are hereby instructed to download the hall ticket from website www.ksp.gov.in and attend the examination.

babu:gpr

## ಫೆಲೋಶಿಪ್‌ಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ಏಪ್ರಿಲ್ 28 (ಕರ್ನಾಟಕ ವಾರ್ತೆ)

ಕರ್ನಾಟಕ ಯಕ್ಷಗಾರನ ಬಯಲಾಟ ಅಕಾಡೆಮಿಯ ವ್ಯಾಪ್ತಿಯಲ್ಲಿ ಬರುವ ಯಕ್ಷಗಾನ ಮತ್ತು ಬಯಲಾಟ ಕಲೆಗಳ ಕುರಿತು ವಿಷಯದ ಬಗ್ಗೆ ಅಧ್ಯಯನ ಮಾಡಲು 2015–16 ನೇ ಸಾಲಿನಲ್ಲಿ ವಿಶೇಷ

ಘಟಕ ಯೋಜನೆಯಡಿ ಪರಿಶಿಷ್ಟ ವರ್ಗದ ಮತ್ತು ಗಿರಿಜನ ಉಪಯೋಜನೆಯಡಿ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಂದ ಫೆಲೋಶಿಫ್‌ಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಫೆಲೋಶಿಪ್ ಪ್ರಕಟಣೆಯನ್ನು ಅಕಾಡೆಮಿ ವೆಬ್‌ಸೈಟ್ (www.karnatakayakshaganabayalataacademy.com) ನಲ್ಲಿ ಪ್ರಕಟಿಸಿದೆ.

ಬಾಬು:ಜಿಪಿಆರ್

## ಕುಡಿಯುವ ನೀರು ಯೋಜನೆಗೆ ಅಗತ್ಯ ವಿದ್ಯುತ್

– ಸಚಿವ ಡಿ. ಕೆ. ಶಿವಕುಮಾರ್

ಬೆಂಗಳೂರು, ಏಪ್ರಿಲ್ 28 (ಕರ್ನಾಟಕ ವಾರ್ತೆ)

ಕುಡಿಯುವ ನೀರು ಸರಬರಾಜು ಯೋಜನೆಗೆ ವಿದ್ಯುತ್ ಸಂಪರ್ಕದ ಕೊರತಗೆ ಇಲ್ಲ. ಬೇಡಿಕೆ ಬಂದ 24 ಗಂಟೆಗಬಳ ಒಳಗಾಗಿ ವಿದ್ಯುತ್ ಸರಬರಾಜು ಮಾಡುವಂತೆ ಈಗಾಗಲೇ ಸುತ್ತೋಲೆ ಹೊರಡಿಸಲಾಗಿದೆ ಎಂದು ಇಂಧನ ಸಚಿವ ಡಿ.ಕೆ. ಶಿವಕುಮಾರ್ ತಿಳಿಸಿದರು.

ಇಂದು ವಿಧಾನಸೌಧದಲ್ಲಿ ಕಡೂರು ಕ್ಷೇತ್ರದ ವಿದ್ಯುತ್ ಬೇಡಿಕೆಗಳಿಗೆ ಸಂಬಂಧಿಸಿದಂತೆ ಚರ್ಚೆ ನಡೆಸಿದ ನಂತರ ಸುದ್ಧಿಗಾರರೊಂದಿಗೆ ಮಾತನಾಡಿದ ಸಚಿವರು ರಾಜ್ಯದಲ್ಲಿ ಬೇಡಿಕೆಗೆ ಅನುಗುಣವಾಗಿ ವಿದ್ಯುತ್ ಸರಬರಾಜು ಮಾಡಲಾಗುತ್ತಿದ್ದು ವಿದ್ಯುತ್ ಸಮಸ್ಯೆ ಎದುರಾಗಿಲ್ಲ ಎಂದರು.

ಕಡೂರು ವಿಧಾಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಿದ್ಯುತ್‌ಗೆ ಸಂಬಂಧಿಸಿದಂತೆ ಸುಮಾರು 9 ಬೇಡಿಕೆಗಳನ್ನು ತಕ್ಷಣ ಬಗೆಹರಿಸಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಕಡೂರು ಕ್ಷೇತ್ರದ ವ್ಯಾಪ್ತಿಯಲ್ಲಿ ಸೋಲಾರ್ ಪಾರ್ಕ್ ನಿರ್ಮಾಣ, ವಿದ್ಯುತ್ ಉಪಕೇಂದ್ರಗಳ ಸ್ಥಾಪನೆ ಹಾಗೂ ಹೊಸ ವಿದ್ಯುತ್ ಸಂಪರ್ಕ ಕಲ್ಪಿಸಲು ಕ್ರಮಕೊಳ್ಳಲಾಗುವುದು ಎಂದು ಸಚಿವರು ತಿಳಿಸಿದರು.

ಕಡೂರು ವಿಧಾನಸಭಾ ಕ್ಷೇತ್ರದ ಶಾಸಕ ವೈ.ಎಸ್.ವಿ. ದತ್ತ, ಇಂಧನ ಇಲಾಖಾ ಅಧಿಕಾರಿಗಳು ಉಪಸ್ಥಿತರಿದ್ದರು.

ಬಾಬು:ಕೆಪಿಜಿಪಿಆರ್

## ನಗರದ ಕಸ ವಿಲೇವಾರಿಗೆ ಅಗತ್ಯ ಕ್ರಮ

– ಸಚಿವ ಕೆ.ಜೆ. ಜಾರ್ಜ್

ಬೆಂಗಳೂರು, ಏಪ್ರಿಲ್ 28 (ಕರ್ನಾಟಕ ವಾರ್ತೆ)

ನವದೆಹಲಿ ಹಾಗೂ ಚೆನ್ನೈ ಮಾದರಿಯಲ್ಲಿ ನಗರದಲ್ಲಿನ ಕಸ ವಿಲೇವಾರಿ ಮಾಡಲು ಚಿಂತನೆ ನಡೆಸಲಾಗಿದೆ ಎಂದು ಬೆಂಗಳೂರು ನಗರಾಭಿವೃದ್ಧಿ ಸಚಿವ ಕೆ.ಜೆ. ಜಾರ್ಜ್ ತಿಳಿಸಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ನಗರದ ಕಸ ವಿಲೇವಾರಿ ಕುರಿತ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು ಚೆನ್ನೈ ಹಾಗೂ ದೆಹಲಿಗಳಲ್ಲಿ ಕಸ ವಿಲೇವಾರಿಗೆ ನೂತನ ತಂತ್ರಜ್ಞಾನ ಬಳಸಲಾಗುತ್ತಿದೆ. ಇದರ ಸಾಧಕ ಬಾಧಕ ಅರಿಯಲು ಅಧಿಕಾರಿಗಳಿಗೆ ತಿಳಿಸಲಾಗಿದೆ.

ವರದಿ ನಂತರ ಕ್ರಮ ಕೈಗೊಳ್ಳಲಾಗುವುದು ಎಂದ ಅವರು ನಗರದ ತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದಂತೆ ಶಾಶ್ವತ ಪರಿಹಾರಕ್ಕಾಗಿ ನಗರದಲ್ಲಿ 75 ಟನ್ ತ್ಯಾಜ್ಯ ನಿರ್ವಹಣಾ ಘಟಕ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದು. ಇಂತಹ ತ್ಯಾಜ್ಯ ನಿರ್ವಹಣಾ ಘಟಕ ಪ್ರಾರಂಭಿಸಲು ಹೆಚ್ಚು ಭೂಮಿಯ ಅಗತ್ಯವಿಲ್ಲ ಎಂದರು.

ಬಾಬು:ಕೆಪಿಜಿಪಿಆರ್

## ಮೇಕೆದಾಟು ನೀರಾವರಿ ಯೋಜನಾ ವರದಿ ಕೇಂದ್ರ ಜಲ ಆಯೋಗಕ್ಕೆ ಸಲ್ಲಿಕೆ

ಬೆಂಗಳೂರು, ಏಪ್ರಿಲ್ 28 (ಕರ್ನಾಟಕ ವಾರ್ತೆ)

ರಾಯಚೂರು ಜಿಲ್ಲೆಯಲ್ಲಿನ ರಾಜೋಳಿ ಬಂಡ ತಿರುವು ನೀರಾವರಿ ಯೋಜನೆಯಿಂದ ಕರ್ನಾಟಕವು ಸೇರಿದಂತೆ, ತೆಲಂಗಾಣ ಹಾಗೂ ಆಂಧ್ರಪ್ರದೇಶ ರಾಜ್ಯಗಳಿಗೆ ಅನುಕೂಲವಾಗಲಿದೆ ಎಂದು ನೀರಾವರಿ ಸಚಿವ ಎಂ.ಬಿ. ಪಾಟೀಲ್ ಅವರು ತಿಳಿಸಿದರು.

ವಿಧಾನ ಸೌಧದಲ್ಲಿ ಕಛೇರಿಯಲ್ಲಿ ಸುದ್ದಿಗಾರರೊಂದಿಗೆ ಇಂದು ಮಾತನಾಡಿದ ಸಚಿವರು ಇದು ತುಂಗಭದ್ರಾ ನದಿಯ ಯೋಜನೆಯಾಗಿದ್ದು ತೆಲಂಗಾಣದ ಆಲಂಬೂರ್, ಗದ್ದಾಲ್ ತಾಲ್ಲೂಕಿನ 75 ಗ್ರಾಮಗಳಿಗೆ ಹಾಗೂ ಮಾನ್ವಿ ತಾಲ್ಲೂಕಿನ 15 ಗ್ರಾಮಗಳಿಗೆ ಆಂಧ್ರಪ್ರದೇಶ ಕರ್ನೂಲ್ ತಾಲ್ಲೂಕಿನ ನಾಲ್ಕು ಗ್ರಾಮಗಳಿಗೆ ಈ ಯೋಜನೆಯಿಂದ ಅನುಕೂಲವಾಗಲಿದೆ ರಾಜ್ಯದಲ್ಲಿ ಜೂನ್ ಅಂತ್ಯದವರೆಗೂ ಕುಡಿಯುವ ನೀರಿಗೆ ಸಮಸ್ಯೆ ಇಲ್ಲ ಜಲಾಶಯಗಳಲ್ಲಿ ನೀರು ಖಾಲಿಯಾದಲ್ಲಿ ಮಾತ್ರ ಡೆಡ್ ಸ್ಟೋರೇಜ್ ನೀರನ್ನು ಕುಡಿಯಲು ಬಳಸಲಾಗುವುದು ಎಂದು ಸಚಿವರು ತಿಳಿಸಿದರು.

ಬೆಂಗಳೂರು ನಗರಕ್ಕೆ ಕುಡಿಯುವ ನೀರು ಸರಬರಾಜು ಮಾಡುವ ಮೇಕೆದಾಟು ಯೋಜನೆಗೆ ಯೋಜನಾ ವರದಿ ಸಿದ್ದಗೊಂಡಿದ್ದು ಮೇ ತಿಂಗಳಲ್ಲಿ ಕೇಂದ್ರ ಜಲ ಆಯೋಗಕ್ಕೆ ಈ ವರದಿಯನ್ನು ಅನುಮತಿಗಾಗಿ ಸಲ್ಲಿಸಲಾಗುವುದು. ಮೇಕೆದಾಟು ನೀರಾವರಿ ಯೋಜನೆ ಪೂರ್ಣಗೊಂಡಲ್ಲಿ ಸುಮಾರು 60 ಟಿ..ಎಂ.ಸಿ. ನೀರು ಸಂಗ್ರಹಣೆಯಾಗಲಿದೆ. ಈ ಯೋಜನೆಗೆ ಸುಮಾರು 5 ಸಾವಿರ ಕೋಟಿ ರೂ. ವೆಚ್ಚವಾಗಲಿದೆ ಎಂದರು.

ಬಾಬು/ಕೆಪಿ/ಕೆಎಂ

## Applications for National Award

**Bangalore, April 28 (Karnataka Information)**

Government of India has instituted an award called Rajiv Gandhi Manav Seva Award for service to children to give recognition to 3 individuals who have

made outstanding contribution towards service of Children for over 10 years in the field of Child development, Child protection and Child welfare.

The award comprises cash prize of Rs. 1.00 lakh, silver plaque and a citation for each awardee.

The 3 individuals to be selected for the award should have worked for the cause of children for over 10 years. Paid officers of the Institutions will not be eligible for selection. The sole basis of the selection will be quality of work performed by the individual for the cause of children and its significance for the cause.

On the same lines the Government of India has instituted an award called National Award for Child Welfare to give recognition to individuals and Institutions. National award for child welfare will be given to 3 individuals and 5 institutions who have worked for the welfare of children for some years. Paid officers of the institutions will not be eligible for selection. The award carries a cash prize of Rs. 3.00 lakhs and a citation to each institution and Rs. 1.00 lakh and citation to each individual.

The committee constituted by the Government of Karnataka will select and recommend the names to the above awards to Government of India.

The prescribed applications for the year 2016 may be obtained from the Deputy Director, Department of Women & Child Development in the respective districts. The filled applications in English should be sent to the concerned District Deputy Director, Department of Women & Child Development.

The last date for submission of applications for Rajiv Gandhi Manava Seva award and National Award for Child Welfare is 25th May 2016. The applications received after due date will not be considered for what so ever reason.

Babu/km

## ರಾಷ್ಟ್ರ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

**ಬೆಂಗಳೂರು, ಏಪ್ರಿಲ್ 28 (ಕರ್ನಾಟಕ ವಾರ್ತೆ)**

ಭಾರತ ಸರ್ಕಾರವು ಮಕ್ಕಳ ಅಭಿವೃದ್ಧಿ, ಮಕ್ಕಳ ರಕ್ಷಣೆ ಹಾಗೂ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ 10 ವರ್ಷಕ್ಕಿಂತ ಹೆಚ್ಚಿನ ಸೇವೆಯನ್ನು ಸಲ್ಲಿಸಿರುವಂತಹ ವ್ಯಕ್ತಿಗಳನ್ನು ಗುರುತಿಸಿ ರಾಜೀವ್‌ಗಾಂಧಿ ಮಾನವಸೇವಾ ಪ್ರಶಸ್ತಿಯನ್ನು 3 ವ್ಯಕ್ತಿಗಳಿಗೆ ನೀಡಿ ಗೌರವಿಸುತ್ತದೆ.

ಪ್ರತಿ ವ್ಯಕ್ತಿಗೆ ನೀಡುವ ಪ್ರಶಸ್ತಿಯು ರೂ.1.00 ಲಕ್ಷ ನಗದು ಬಹುಮಾನ, ಬೆಳ್ಳಿ ಫಲಕ ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ.

ಈ ಪ್ರಶಸ್ತಿಗಾಗಿ ಆಯ್ಕೆ ಮಾಡುವ 3 ವ್ಯಕ್ತಿಗಳು ಮಕ್ಕಳ ಶ್ರೇಯೋಭಿವೃದ್ಧಿಗಾಗಿ 10 ವರ್ಷಗಳಿಗೂ ಮೇಲ್ಪಟ್ಟು ಕಾರ್ಯವನ್ನು ನಿರ್ವಹಿಸಿರಬೇಕು. ಸಂಘ–ಸಂಸ್ಥೆಗಳಲ್ಲಿ ವೇತನ ಪಡೆಯುವ ವ್ಯಕ್ತಿಗಳು ಈ ಪ್ರಶಸ್ತಿಗೆ ಅರ್ಹರಿರುವುದಿಲ್ಲ. ಈ ಪ್ರಶಸ್ತಿಗೆ ಆಯ್ಕೆ ಮಾಡಲು ಇರುವ ಒಂದೇ ಮಾನದಂಡ–ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ವ್ಯಕ್ತಿಗಳು ಮಾಡಿರುವ ಕೆಲಸದ ಗುಣಮಟ್ಟದ ಮೇಲೆ ಅವಲಂಬಿತವಾಗಿರುತ್ತದೆ.

ಅದೇ ರೀತಿಯಲ್ಲಿ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಹಲವು ವರ್ಷ ಉತ್ತಮ ಸೇವೆ ಸಲ್ಲಿಸಿದ 3 ವ್ಯಕ್ತಿಗಳು ಹಾಗೂ 5 ಸಂಸ್ಥೆಗಳಿಗೆ ಪ್ರಶಸ್ತಿ ನೀಡುವ ಯೋಜನೆಯನ್ನು ಕೇಂದ್ರ ಸರ್ಕಾರವು ಜಾರಿಗೆ ತಂದಿರುತ್ತದೆ. ಪ್ರತಿ ವ್ಯಕ್ತಿಗೆ ನೀಡುವ ಪ್ರಶಸ್ತಿಯು ರೂ.1.00 ಲಕ್ಷ ನಗದು ಹಾಗೂ ಪ್ರಶಸ್ತಿ ಪತ್ರ ಮತ್ತು ಪ್ರತಿ ಸಂಸ್ಥೆಗೆ ನೀಡುವ ಪ್ರಶಸ್ತಿಯು ರೂ.3.00 ಲಕ್ಷ ನಗದು ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ. ಸಂಘ–ಸಂಸ್ಥೆಗಳಲ್ಲಿ ವೇತನ ಪಡೆಯುವ ವ್ಯಕ್ತಿಗಳು ಈ ಪ್ರಶಸ್ತಿಗೆ ಅರ್ಹರಿರುವುದಿಲ್ಲ. ಈ ಪ್ರಶಸ್ತಿಗೆ ಆಯ್ಕೆ ಮಾಡಲು ಇರುವ ಒಂದೇ ಮಾನದಂಡ–ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ವ್ಯಕ್ತಿಗಳು ಹಾಗೂ ಸಂಸ್ಥೆಗಳು ಮಾಡಿರುವ ಕೆಲಸದ ಗುಣಮಟ್ಟದ ಮೇಲೆ ಅವಲಂಬಿತವಾಗಿರುತ್ತದೆ.

ರಾಜ್ಯ ಸರ್ಕಾರದಿಂದ ರಚಿಸಲ್ಪಟ್ಟಿರುವ ಸಮಿತಿಯು ಪ್ರಶಸ್ತಿಗಳಿಗೆ ಸ್ವೀಕೃತವಾದ ಅರ್ಜಿಗಳನ್ನು ಪರಿಶೀಲಿಸಿ ಅತ್ಯುತ್ತಮ ಸೇವೆ ಸಲ್ಲಿಸಿದ ವ್ಯಕ್ತಿಗಳು ಹಾಗೂ ಸಂಸ್ಥೆಗಳನ್ನು ಆಯ್ಕೆ ಮಾಡಿ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡುತ್ತದೆ.

2016ನೇ ಸಾಲಿಗೆ ರಾಜೀವ್‌ಗಾಂಧಿ ಮಾನವಸೇವಾ ಪ್ರಶಸ್ತಿಗಾಗಿ ಹಾಗೂ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಮತ್ತು ಸಂಸ್ಥೆಗಳಿಗೆ ನೀಡುವ ಪ್ರಶಸ್ತಿಗಾಗಿ ನಿಗದಿಪಡಿಸಿದ ಅರ್ಜಿ ನಮೂನೆಗಳನ್ನು ಆಯಾ ಜಿಲ್ಲಾ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಕಛೇರಿಯಿಂದ ಪಡೆದು, ಆಂಗ್ಲ ಭಾಷೆಯಲ್ಲಿ ಭರ್ತಿ ಮಾಡಿ ಸಂಬಂಧಪಟ್ಟ ಜಿಲ್ಲಾ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರಿಗೆ ಸಲ್ಲಿಸತಕ್ಕದ್ದು.

ರಾಜೀವ್‌ಗಾಂಧಿ ಮಾನವಸೇವಾ ಪ್ರಶಸ್ತಿಗಾಗಿ ಮತ್ತು ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಮತ್ತು ಸಂಸ್ಥೆಗಳಿಗೆ ನೀಡುವ ರಾಷ್ಟ್ರ ಪ್ರಶಸ್ತಿಗಾಗಿ ಅರ್ಜಿಗಳನ್ನು ದಿನಾಂಕ:25.05.2016 ರೊಳಗೆ ಸಂಬಂಧಪಟ್ಟ ಉಪ ನಿರ್ದೇಶಕರಿಗೆ ಸಲ್ಲಿಸತಕ್ಕದ್ದು. ನಿಗದಿತ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಬಾಬು/ಕೆಎಂ